ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1320

ಮಾನ್ಯ ಸದಸ್ಯರ ಹೆಸರು : ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 23.09.2021

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಎನ್.ಪಿ.ಎಸ್. ಯೋಜನೆಯ ಸಾಧಕ ಬಾಧಕಗಳ ಬಗ್ಗೆ ಪರಿಶೀಲಿಸಿ ವರದಿ ನೀಡಲು ರಚಿಸಿರುವ ಸಮಿತಿಯು ಕಾಲಕಾಲಕ್ಕೆ ಸಭೆಗಳನ್ನು ನಡೆಸಿದೆಯೇ; ನಡೆಸಿದ್ದಲ್ಲಿ, ಇಲ್ಲಿಯವರಿಗೆ ಎಷ್ಟು ಸಭೆಗಳನ್ನು ನಡೆಸಿದೆ; ಈ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಬಗ್ಗೆ ಸರ್ಕಾರಕ್ಕೆ ವರದಿ ನೀಡಿದೆಯೇ: (ಸಂಪೂರ್ಣ ವಿವರ ನೀಡುವುದು)	ನೂತನ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ/ ಮಾರ್ಪಾಡು ಮಾಡಲು ಸರ್ಕಾರದ ಆದೇಶ ಸಂಖ್ಯೆ: ಆಇ 107 ಪಿಇಎನ್ 2018, ದಿನಾಂಕ: 11.12.2018 ರಂದು ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ಮೂರು ಸಭೆಗಳನ್ನು ನಡೆಸಿದೆ. ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ.
ಆ)	6ನೇ ವೇತನ ಆಯೋಗದ 2ನೇ ಸಂಪುಟದಲ್ಲಿ ಯಾವ್ಯಾವ ವಿಷಯದ ಬಗ್ಗೆ ಶಿಫಾರಸ್ಸು ಮಾಡಲಾಗಿದೆ; (ವಿವರ ನೀಡುವುದು)	6ನೇ ರಾಜ್ಯ ವೇತನ ಆಯೋಗವು ತನ್ನ ವರದಿಯ 2ನೇ ಸಂಪುಟದಲ್ಲಿ, ಕೆಲವೊಂದು ಇಲಾಖೆಗಳಲ್ಲಿನ ಹುದ್ದೆಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವ ಶಿಫಾರಸ್ಸುಗಳೂ ಸೇರಿದಂತೆ ಸರ್ಕಾರದ ವಿವಿಧ ಇಲಾಖೆಗಳ ಕಾರ್ಯಕ್ಷಮತೆಯನ್ನು ಉತ್ತಮಪಡಿಸುವ ನಿಟ್ಟಿನಲ್ಲಿ ಕೆಲವು ಇಲಾಖೆಗಳ ಮತ್ತು ಹುದ್ದೆಗಳ ವಿಲೀನಾತಿ, ಹೊಸ ವೃಂದಗಳ ಸೃಜನೆ ಮುಂತಾದಂತೆ ಸರ್ಕಾರದ ಇಲಾಖೆಗಳ ಮತ್ತು ಸೇವೆಗಳ ಪುನರ್ ರಚನೆ, ಸಿಬ್ಬಂದಿ ನೇಮಕಾತಿ ಪ್ರಾಧಿಕಾರದ ಸ್ಥಾಪನೆ, ತರಬೇತಿ ಕೇಂದ್ರಗಳ ಸ್ಥಾಪನೆ, ಸರ್ಕಾರಿ ನೌಕರರ ಮತ್ತು ಇಲಾಖೆಗಳ ಉತ್ಪಾದಕತೆಯನ್ನು ಹೆಚ್ಚಿಸಲು ಸಾಮರ್ಥ್ಯ ವೃದ್ಧಿ ಮತ್ತು ಪ್ರೋತ್ಸಾಹಕ ಯೋಜನೆಗಳನ್ನು ಅನುಷ್ಠಾನಗೊಳಿಸುವುದು, ಇಲಾಖೆಗಳ ಕಾರ್ಯಸ್ಥಿತಿ, ವಿಧಾನಗಳು ಇತ್ಯಾದಿಗಳ ಸುಧಾರಣೆ, ಮಾನವ ಸಂಪನ್ಮೂಲದ ನಿರ್ವಹಣೆ ಮುಂತಾದ ಆಡಳಿತ ಸುಧಾರಣಾ ವಿಷಯಗಳ ಬಗ್ಗೆಯೂ ಸಹ ಶಿಫಾರಸ್ಸು ಮಾಡಿರುತ್ತದೆ.
ಇ)	2ನೇ ಸಂಪುಟವನ್ನು ಅಧ್ಯಯನ ಮಾಡಲು ರಚಿಸಿರುವ ಅಧಿಕಾರಿಗಳ ಸಮಿತಿಯು ಸಲ್ಲಿಸಿರುವ ಅಧ್ಯಯನ ವರದಿಯ ವಿವರಗಳೇನು; ಈ ವರದಿಯ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ನೀಡುವುದು; (ವಿವರ ನೀಡುವುದು)	ವಿವಿಧ ಇಲಾಖೆಗಳ ಕೆಲವೊಂದು ವರ್ಗದ ಹುದ್ದೆಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವ ಮತ್ತು ಕೆಲವೊಂದು ವರ್ಗದ ಹುದ್ದೆಗಳಿಗೆ ವಿಶೇಷ ಭತ್ಯೆಗಳನ್ನು ಮಂಜೂರು ಮಾಡುವ ಕುರಿತಾದ ವೇತನ ಆಯೋಗದ 2ನೇ ಸಂಪುಟದಲ್ಲಿನ ವರದಿಯಲ್ಲಿನ ಶಿಫಾರಸ್ಸುಗಳ ಪೈಕಿ, ರಾಜ್ಯ ಸರ್ಕಾರವು ಪರಿಗಣಿಸದ ವೃಂದಗಳಿಗೆ ಸೀಮಿತವಾದ ಶಿಫಾರಸ್ಸುಗಳ ಪರಿಶೀಲನೆಯನ್ನು ಅಧಿಕಾರಿ ಸಮಿತಿಗೆ ವಹಿಸಲಾಗಿರುತ್ತದೆ. ಪ್ರಸ್ತುತ ಅಧಿಕಾರಿ ಸಮಿತಿಯ ವರದಿಯು ಸರ್ಕಾರದ ಪರಿಶೀಲನೆಯಲ್ಲಿದೆ.
ಈ)	ಯಾವ ಕಾಲಮಿತಿಯೊಳಗೆ 2ನೇ ಸಂಪುಟದ ಶಿಫಾರಸ್ಸುಗಳನ್ನು ಜಾರಿಗೊಳಿಸಲಾಗುವುದು? (ಮಾಹಿತಿ ನೀಡುವುದು)	

ಆಇ 163 ಪಿಇಎನ್ 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ